# 2 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ
# ಉತ್ತರ ಕನ್ನಡ : ಕಾರವಾರ

**ಎಸ್.ಸಿ. ನಂ. 38/2022**

**ದೋ.ಸಾ. :2 ಫ್ರಾ.ಸಾ. : 6**

| | | |
|---|---|---|
| ಸಾಕ್ಷಿಯ ಹೆಸರು | : | ಮೌಲಾ ಸಾಬ ಹುಸೇನ ಸಾಬ ಶೇಖ |
| ತಂದೆಯ ಹೆಸರು | : | ಹುಸೇನ ಸಾಬ ಶೇಖ |
| ವಯಸ್ಸು | : | 81 ವರ್ಷ |
| ಕೆಲಸ | : | ರೈತಾಪಿ |
| ವಾಸ | : | ಗುಂಜಾವತಿ, ಮುಂಡಗೋಡ |

**ದಿನಾಂಕಃ 19-12-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸರಕಾರಿ ಅಭಿಯೋಜಕರಿಂದ:-**

1. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಚಾಸಾ-12 ರವರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ, ಕಚ್ಚಾ ನಕಾಶೆ ತಯಾರಿಸಿಲ್ಲ ಹಾಗೂ ಯಾವುದೇ ತಿಳುವಳಿಕೆ ಪತ್ರ ನೀಡಿಲ್ಲ. ಅಂದಾಜು 6-7 ವರ್ಷಗಳ ಹಿಂದೆ ಮೂರು ಬರೆದಿಟ್ಟ ದಾಖಲೆಗಳಲ್ಲಿ ಪೊಲೀಸರು ನನ್ನ ಸಹಿಯನ್ನು ಠಾಣೆಯಲ್ಲಿ ಪಡೆದುಕೊಂಡಿರುತ್ತಾರೆ. ಸಾಕ್ಷಿಯು ತಿಳುವಳಿಕೆ ಪತ್ರ, ಪಂಚನಾಮೆ ಹಾಗೂ ಕಚ್ಚಾ ನಕಾಶೆಯನ್ನು ನೋಡಿ ಗುರುತಿಸಿದ್ದು, ತಿಳುವಳಿಕೆ ಪತ್ರವನ್ನು ನಿಪಿ-8 ಎಂದು, ಕಚ್ಚಾ ನಕಾಶೆಯನ್ನು ನಿಪಿ-9 ಎಂದು, ಅವುಗಳಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-8(ಎ), ನಿಪಿ-9(ಎ) ಎಂದು ಗುರುತಿಸಲಾಯಿತು. ಪಂಚನಾಮೆಯನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ನಿಪಿ-2 ರಲ್ಲಿರುವ ವಿವರ ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಮಾನ್ಯ ಅಭಿಯೋಜಕರು ಅನುಮತಿಯನ್ನು ಕೇಳುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಗಮನಿಸಿ, ಅನುಮತಿ ನೀಡಲಾಯಿತು)

2. ದಿನಾಂಕ 17-04-2019 ರಂದು ಚಾಸಾ-12 ರವರು ನನ್ನನ್ನು ಹಾಗೂ ಚಾಸಾ-3 ರವರನ್ನು ಈ ಪ್ರಕರಣದ ಘಟನಾ ಸ್ಥಳವಾದ ಗುಂಜಾವತಿ ಗ್ರಾಮದಲ್ಲಿರುವ ದರ್ಗಾದ ಮುಂದೆ ಹಾದುಹೋಗಿರುವ ಪಕ್ಕದ ಕಚ್ಚಾ ರಸ್ತೆಯಲ್ಲಿ ಕರೆಯಿಸಿ, ನಿಪಿ-8 ರಂತೆ ತಿಳುವಳಿಕೆ ಪತ್ರ ನೀಡಿದ್ದರು ಎಂದರೆ ಸರಿಯಲ್ಲ ಹಾಗೂ ಅಲ್ಲಿ, ಚಾಸಾ-4 ರವರು ತೋರಿಸಿದ ಘಟನಾ ಸ್ಥಳವನ್ನು ಪರಿಶೀಲಿಸಿ, ನಿಪಿ-2 ರಂತೆ ಪಂಚನಾಮೆ ತಯಾರಿಸಿ, ನಿಪಿ-9 ರಂತೆ ಕಚ್ಚಾ ನಕಾಶೆ ತಯಾರಿಸಿ, ಸ್ಥಳದಲ್ಲಿಯೇ ನನ್ನ ಸಹಿಯನ್ನು ಪಡೆದರು ಎಂದರೆ ಸರಿಯಲ್ಲ. ನನಗೆ ಆರೋಪಿತರ ಪರಿಚಯವಿದೆ ಎಂದರೆ ಸರಿ. ಆರೋಪಿತರ ಪರಿಚಯವಿದೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ಶ್ರೀ ಎಸ್.ಎ.ಕೆ. ವಕೀಲರಿಂದಃ-**

ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.

**ಮರು ವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಸಾಕ್ಷಿಯ ಹೇಳಿಕೆಯನ್ನು ಗಣಕ ಯಂತ್ರದ ಮೂಲಕ ಬೆರಳಚ್ಚು ಮಾಡಿಸಲಾಗಿದೆ.)

ಓ.ಹೇ.ಕೇ.ಸ.ಇ.
Sd/-
(ಮಾಯಣ್ಣ ಬಿ.ಎಲ್.)
2 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಉತ್ತರಕನ್ನಡ, ಕಾರವಾರ